ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ: ಸಿ5(5) ದ್ವಿ.ದ.ಸ.ಬಡ್ತಿ-12/2015-16 ದಿನಾಂಕ: 22-08-2019

**ಜ್ಞಾಪನ**

ವಿಷಯ: ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017ರನ್ವಯ ಕ್ರಮ ತೆಗೆದುಕೊಳ್ಳುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 186 ಎಸ್ ಆರ್ ಎಸ್ 2018 ಬೆಂಗಳೂರು, ದಿನಾಂಕ; 27-02-2019.

2. ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 186 ಎಸ್ ಆರ್ ಎಸ್ 2018 ಬೆಂಗಳೂರು, ದಿನಾಂಕ; 15-05-2019

********

ಉಲ್ಲೇಖ-01 ರ ಸರ್ಕಾರದ ದಿನಾಂಕ: 27-02-2019ರ ಆದೇಶದ ಕಂಡಿಕೆ 8ರ ಉಪಕಂಡಿಕೆ(1) ರನ್ವಯ ಕ್ರಮ ತೆಗೆದುಕೊಂಡು ನಂತರ ಸದರಿ ಆದೇಶದ ಕಂಡಿಕೆ 8ರ ಉಪಕಂಡಿಕೆ (2) ರಲ್ಲಿ ಉಲ್ಲೇಖಿಸಲಾದ ಕರ್ನಾಟಕ ರಾಜ್ಯ ಸಿವಿಲ್ ಸೇವಾ (ಮುಂಬಡ್ತಿ ವೇತನ ಮತ್ತು ಪಿಂಚಣಿಗಳ ಕ್ರಮಬದ್ಧತೆ) ಅಧಿನಿಯಮ,1973ರ ಸೆಕ್ಷನ್ 4,5 ಮತ್ತು 6 ನ್ನು ಸೆಕ್ಷನ್ 9ರೊಡನೆ ಸಹವಾಚನ ಮಾಡಿಕೊಂಡು, ಇವುಗಳನ್ವಯ ತಾತ್ಕಾಲಿಕ/ಅಂತಿಮ ಜ್ಯೇಷ್ಠತಾ ಪಟ್ಟಿಗಳನ್ನು ಸಿದ್ಧಪಡಿಸಿ ಪ್ರಕಟಿಸುವ, ಅರ್ಹತಾ ದಿನಂಕಗಳನ್ನು ನಿಗಧಿ ಪಡಿಸುವ, ಮುಂಬಡ್ತಿಗಳನ್ನು ಪನರಾವಲೋಕನ ಮಾಡುವ, ವೇತನ ಮತ್ತು ಪಿಂಚಣಿಗಳನ್ನು ನಿಗಧಿ ಪಡಿಸುವುದನ್ನು ಒಳಗೊಂಡ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು ಎಂದು ಆದೇಶವಿರುತ್ತದೆ

ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು 1967ರನ್ವಯ ಗ್ರೂಪ್ ಡಿ ವೃಂದದಿಂದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿದ್ದು, ಸದರಿ ಬಡ್ತಿಯನ್ನು ನೀಡಲು ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರು ನೇಮಕಾತಿ ಪ್ರಾಧಿಕಾರಿಯಾಗಿರುತ್ತಾರೆ.

ಈ ಮೇಲೆ ಉಲ್ಲೇಖಿಸಿರುವ ಸರ್ಕಾರದ ಆದೇಶಗಳಲ್ಲಿ ತಿಳಿಸಿರುವ ಅಂಶಗಳು ಹಾಗೂ ಚಾಲ್ತಿ ನಿಯಮಗಳನ್ವಯ ಗ್ರೂಪ್ ಡಿ ವೃಂದದ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಅಂತಹ ಜೇಷ್ಠತಾ ಪಟ್ಟಿಗಳನ್ನು ಆಧಾರವಾಗಿಟ್ಟುಕೊಂಡು ಅರ್ಹ ನೌಕರರಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆಯನ್ನು ನಿಯಮಾನುಸಾರ ಪರಿಶೀಲಿಸಿಕೊಂಡು ಕ್ರಮವಹಿಸಲು ಜಿಲ್ಲಾ ಉಪ ನಿರ್ದೇಶಕರು [ಆಡಳಿತ]. ರವರಿಗೆ ತಿಳಿಸಿದೆ. ಕ್ರಮವಹಿಸಿರುವ ಬಗ್ಗೆ ಅನುಸರಣಾ ವರದಿಯನ್ನು ಈ ಕಛೇರಿಗೆ ಕಳುಹಿಸಲು ತಿಳಿಸಿದೆ.

(ಅರುಳ್ ಕುಮಾರ್)
ಜಂಟಿ ನಿರ್ದೇಶಕರು(ಆಡಳಿತ)

**ರವರಿಗೆ**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ.
3. ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು [ಆಡಳಿತ]. ರವರಿಗೆ ಮುಂದಿನ ಕ್ರಮಕ್ಕಾಗಿ.
4. ಕಛೇರಿ ಪ್ರತಿ

**ಈ ಜ್ಞಾಪನವನ್ನು ಇಲಾಖೆಯ ಅಂತರಜಾಲ www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ.**